**Akashvani : Bangalore**
**Regional Bulletin In Kannada**
**13.06.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**13.06.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ದೆಹಲಿಯಲ್ಲಿಂದು ನಡೆದ ೧೬ನೇ ಹಣಕಾಸು ಆಯೋಗದ ಸಭೆ; ರಾಜ್ಯದ ಪ್ರಸ್ತಾವನೆ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ಕಲ್ಯಾಣ ಕರ್ನಾಟಕ ಭಾಗದ ೪೪೦ ಕೋಟಿ ರೂಪಾಯಿಗೂ ಅಧಿಕ ವೆಚ್ಚದ ವಿವಿಧ ಕಾಮಗಾರಿಗಳಿಗೆ ನಾಳೆ ಮುಖ್ಯಮಂತ್ರಿ ಚಾಲನೆ**

**೩. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಮಾವು, ಹಲಸು ಮಾರಾಟ ಮೇಳ ಉದ್ಘಾಟಿಸಿದ ಸಚಿವ ಕೆ.ಎಚ್.ಮುನಿಯಪ್ಪ**

**೪. ಮುಂದಿನ ಎರಡು ದಿನಗಳ ಕಾಲ ರಾಜ್ಯದ ಹಲವು ಜಿಲ್ಲೆಗಳಲ್ಲಿ ಗಾಳಿಯೊಂದಿಗೆ ಭಾರೀ ಮಳೆ ಸಾಧ್ಯತೆ- ಹವಾಮಾನ ಇಲಾಖೆ ಮುನ್ಸೂಚನೆ**

**<><*<><>*><>**

ದೆಹಲಿಯಲ್ಲಿಂದು ನಡೆದ ೧೬ನೇ ಹಣಕಾಸು ಆಯೋಗದ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗವಹಿಸಿದ್ದರು. ಆಯೋಗದ ಅಧ್ಯಕ್ಷ ಡಾ.ಅರವಿಂದ ಪನಗರಿಯ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ಕೇಂದ್ರದಿಂದ ರಾಜ್ಯಗಳಿಗೆ ತೆರಿಗೆ ಹಂಚಿಕೆ ಮತ್ತು ಹಣಕಾಸು ವರ್ಗಾವಣೆಗಳ ಕುರಿತು ರಾಜ್ಯದ ಆಶಯಗಳು, ನಿರೀಕ್ಷೆಗಳು ಮತ್ತು ಪ್ರಸ್ತಾವನೆಗಳನ್ನು ಮುಖ್ಯಮಂತ್ರಿಗಳು ಮಂಡಿಸಿದರು. ಹೆಚ್ಚುವರಿ ಜ್ಞಾಪಕ ಪತ್ರವನ್ನು ಆಯೋಗಕ್ಕೆ ಸಲ್ಲಿಸುವುದರೊಂದಿಗೆ, ಈ ಜ್ಞಾಪಕ ಪತ್ರದಲ್ಲಿ ನ್ಯಾಯಯುತ, ಪಾರದರ್ಶಕ ಮತ್ತು ಬೆಳವಣಿಗೆಯನ್ನು ಪ್ರೋತ್ಸಾಹಿಸುವ ಮತ್ತು ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸುವ ರಾಜ್ಯದ ದೃಷ್ಟಿಕೋನವನ್ನು ಸ್ಪಷ್ಟಪಡಿಸಿದರು. ಆಯೋಗವನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಭಾರತದ ಆರ್ಥಿಕ ಬೆಳವಣಿಗೆಯಲ್ಲಿ ಕರ್ನಾಟಕದ ಪ್ರಮುಖ ಪಾತ್ರವನ್ನು ಒತ್ತಿ ಹೇಳಿದರು. ರಾಜ್ಯವು ದೇಶದ ಒಟ್ಟು ಜಿಡಿಪಿಗೆ ಸುಮಾರು ಶೇಕಡ ೮.೭ರಷ್ಟು ಕೊಡುಗೆ ನೀಡುತ್ತಿದ್ದು, ಜಿ.ಎಸ್.ಟಿ ಸಂಗ್ರಹಣೆಯಲ್ಲಿ ೨ನೇ ಸ್ಥಾನದಲ್ಲಿದೆ. ಈ ಕೊಡುಗೆಯ ಹೊರತಾಗಿಯೂ, ಸಂಪನ್ಮೂಲ ಹಂಚಿಕೆಯಲ್ಲಿ ಉಂಟಾಗಿರುವ ತೀವ್ರ ಅಸಮತೋಲನವನ್ನು ಮುಖ್ಯಮಂತ್ರಿಗಳು ಪ್ರಸ್ತುತ ಪಡಿಸಿದರು. ಕೇಂದ್ರ ಹಾಗೂ ರಾಜ್ಯಗಳ ನಡುವಿನ ಹಂಚಿಕೆಯು ಕನಿಷ್ಠ ಶೇಕಡ ೫೦ ಕ್ಕೆ ಹೆಚ್ಚಿಸಬೇಕು ಮತ್ತು ಸೆಸ್‌ಗಳು ಮತ್ತು ಸರ್ಚಾರ್ಜುಗಳು ಶೇಕಡ ೫ ಕ್ಕೆ ಮಿತಿಗೊಳಿಸಬೇಕೆಂದು ಪ್ರಸ್ತಾಪಿಸಿದರು. ಈ ಸಭೆಯಲ್ಲಿ ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಹಣಕಾಸು ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ್, ಹಣಕಾಸು ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದರು

<><*<><>*><>

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ‘ಆರೋಗ್ಯ ಆವಿಷ್ಕಾರ’ ಯೋಜನೆಯಡಿ ೪೪೦ ಕೋಟಿ ೬೮ ಲಕ್ಷ ರೂಪಾಯಿ ವೆಚ್ಚದ ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿವಿಧ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರು ನಾಳೆ ಚಾಲನೆ ನೀಡಲಿದ್ದಾರೆ. ಈ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ, ಇಂದು ನಗರದ ಜಿಲ್ಲಾ ಕ್ರೀಡಾಂಗಣಕ್ಕೆ ಭೇಟಿ ನೀಡಿ ಕಾರ್ಯಕ್ರಮದ ಅಂತಿಮ ಸಿದ್ಧತಾ ಕಾರ್ಯ ಪರಿಶೀಲಿಸಿದರು. ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯಸಿಂಗ್, ಸಚಿವರಾದ ದಿನೇಶ ಗುಂಡೂರಾವ್ ಸೇರಿದಂತೆ ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಉಸ್ತುವಾರಿ ಸಚಿವರು, ಶಾಸಕರು, ಹಿರಿಯ ಅಧಿಕಾರಿಗಳು ಆಗಮಿಸುವ ನಿರೀಕ್ಷೆ ಇದೆ. ಮುಖ್ಯಮಂತ್ರಿ ಪ್ರವಾಸದ ಹಿನ್ನೆಲೆಯಲ್ಲಿ ಸೂಕ್ತ ಬಂದೋಬಸ್ತ್‌ಗಾಗಿ ತೆಗೆದುಕೊಂಡ ಕ್ರಮಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಮತ್ತು ಕಲಬುರಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎ.ಶ್ರೀನಿವಾಸ, ಹೆಚ್ಚುವರಿ ಎಸ್.ಪಿ.ಧರಣೇಶ್ ಜಿಲ್ಲಾ ಕ್ರೀಡಾಂಗಣಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ತೋಟಗಾರಿಕೆ ಇಲಾಖೆ, ಕೃಷಿ ಇಲಾಖೆ ಸಹಯೋಗದಲ್ಲಿ ಜಿಲ್ಲೆಯ ದೇವನಹಳ್ಳಿಯಲ್ಲಿ ಜಿಲ್ಲಾ ಮಟ್ಟದ ಮಾವು, ಹಲಸು ಮತ್ತು ಇತರೆ ಹಣ್ಣುಗಳ ಪ್ರದರ್ಶನ ಹಾಗೂ ಮಾರಾಟ ಮೇಳ-೨೦೨೫" ಹಾಗೂ ಸಸ್ಯ ಸಂತೆಯನ್ನು ಆಯೋಜಿಸಲಾಗಿತ್ತು. ಆಹಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಮೇಳವನ್ನು ಉದ್ಘಾಟಿಸಿ, ಹಣ್ಣಿನ ಮೇಳಗಳಿಂದ ರೈತರಿಗೆ ನೇರ ಮಾರುಕಟ್ಟೆ ವ್ಯವಸ್ಥೆ ಸಿಗಲಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮಾವು, ಹಲಸು ಹಾಗೂ ಇತರೆ ಹಣ್ಣುಗಳನ್ನು ಬೆಳೆಯುತ್ತಿರುವ ರೈತರಿಗೆ ಉತ್ತಮ ಬೆಲೆ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಹಾಗೂ ರೈತರನ್ನು ಪ್ರೋತ್ಸಾಹಿಸಲು, ಗ್ರಾಹಕರಿಗೆ ಉತ್ತಮ ಗುಣಮಟ್ಟದ ನೈಸರ್ಗಿಕವಾಗಿ ಹಣ್ಣುಗಳು ಸಿಗುವಂತೆ ಮಾಡಲು ಮೇಳ ಆಯೋಜನೆ ಮಾಡಲಾಗಿದ್ದು, ರೈತರನ್ನು ನಾವು ಪ್ರೋತ್ಸಾಹಿಸಬೇಕಿದೆ ಎಂದು ಹೇಳಿದರು.

<><*<><>*><>

ಇದೇ ೧೯ ರಂದು ನಂದಿಗಿರಿಧಾಮದಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ಇಂದು ಅಧಿಕಾರಿಗಳ ತಂಡದೊಂದಿಗೆ ನಂದಿಗಿರಿಧಾಮಕ್ಕೆ ಭೇಟಿ ನೀಡಿ ಪೂರ್ವ ಸಿದ್ದತೆಗಳ ಕುರಿತು ಪರಿಶೀಲನೆ ನಡೆಸಿದರು.

<><*<><>*><>

ಅಹ್ಮದಾಬಾದ್ ವಿಮಾನ ದುರಂತದಲ್ಲಿ ರಾಜಸ್ಥಾನ ಮೂಲದ ಡಾ.ಪ್ರತೀಕ ಜೋಶಿ, ಪತ್ನಿ ಹಾಗೂ ಮೂವರು ಮಕ್ಕಳು ದಾರುಣ ಅಂತ್ಯ ಕಂಡಿದ್ದು, ಬೆಳಗಾವಿ ಕೆಎಲ್‌ಇ ವೈದ್ಯಕೀಯ ಕಾಲೇಜಿನ ಹಳೇ ವಿದ್ಯಾರ್ಥಿಯಾಗಿದ್ದ

ಪ್ರತೀಕರನ್ನು ಅವರ ಸಹಪಾಠಿಗಳು ನೆನಪಿಸಿಕೊಂಡು ದುಃಖ ವ್ಯಕ್ತಪಡಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿರುವ ಪ್ರತೀಕ ಜೋಶಿ ಸ್ನೇಹಿತರಾದ ಡಾ.ಜ್ಯೋತಿ ಬೆಣ್ಣಿ ಬೇಸರ ವ್ಯಕ್ತಪಡಿಸಿದ್ದಾರೆ.

**ಡಾ.ಜ್ಯೋತಿ ಬೆಣ್ಣಿ ( ೨೪ ಸೆಕಂಡ್‌ಗಳು)**

**<><*<><>*><>**

ರಾಜ್ಯದ ಉತ್ತರ ಒಳನಾಡಿನಲ್ಲಿ ನೈಋತ್ಯ ಮುಂಗಾರು ತೀವ್ರವಾಗಿದ್ದು, ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ಸಕ್ರಿಯವಾಗಿತ್ತು. ಕರಾವಳಿ ಕರ್ನಾಟಕ ಮತ್ತು ಉತ್ತರ ಒಳನಾಡಿನ ಹೆಚ್ಚಿನ ಸ್ಥಳಗಳಲ್ಲಿ ಹಾಗೂ ದಕ್ಷಿಣ ಒಳನಾಡಿನ ಅನೇಕ ಸ್ಥಳಗಳಲ್ಲಿ ಮಳೆಯಾಗಿದೆ. ಕಾರವಾರ ಮತ್ತು ಶಿರಾಲಿ ಅತಿ ಹೆಚ್ಚು ೨೪ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ಎರಡು ದಿನಗಳಲ್ಲಿ ಶಿವಮೊಗ್ಗ, ಚಿಕ್ಕಮಗಳೂರು, ಕೊಡುಗು, ಮೈಸೂರು, ಹಾಸನ, ಚಾಮರಾಜನಗರ, ಮಂಡ್ಯ, ರಾಮನಗರ, ದಾವಣಗೆರೆ ಜಿಲ್ಲೆಗಳಲ್ಲಿ ನಿರಂತರ ಗಾಳಿಯೊಂದಿಗೆ ಭಾರೀ ಮಳೆಯಾಗುವ ಸಾಧ್ಯತೆಯಿದೆ. ವಿಜಯನಗರ, ಬಳ್ಳಾರಿ, ಬೆಂಗಳೂರು ಮತ್ತು ಕೋಲಾರ ಜಿಲ್ಲೆಗಳಲ್ಲಿ ನಿರಂತರ ಗಾಳಿಯೊಂದಿಗೆ ಹಗುರ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<><>*><>**

ಎರಡು ಮೂರು ದಿನದಿಂದ ಧಾರವಾಡ ಜಿಲ್ಲೆಯಾದ್ಯಂತ ನಿರಂತರವಾಗಿ ಮಳೆ ಸುರಿಯುತ್ತಿದೆ. ಅಣ್ಣಿಗೇರಿ, ನವಲಗುಂದ ಹಾಗೂ ಕುಂದಗೋಳ ತಾಲೂಕಿನ ೧೩೦ ಮನೆಗಳಿಗೆ ಭಾಗಶಃ ಹಾನಿಯಾಗಿದೆ. ಹಾನಿಯಾದ ಮನೆಗಳಿಗೆ ಎಸ್.ಡಿ.ಆರ್.ಎಫ್ ನಿಯಮಾವಳಿಗಳ ಅನುಸಾರ ಪರಿಶೀಲಿಸಿ, ಪರಿಹಾರವನ್ನು ನೀಡಲಾಗುತ್ತದೆ ಎಂದು ಕಾರ್ಮಿಕ ಇಲಾಖೆ ಸಚಿವ ಸಂತೋಷ ಎಸ್.ಲಾಡ್ ಹೇಳಿದ್ದಾರೆ.

**<><*<><>*><>**

ನಾಳೆ ನಡೆಯಲಿರುವ ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯಲ್ಲಿಂದು ಸ್ವಯಂ ಪ್ರೇರಿತ ಬೃಹತ್ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಶಿಬಿರವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ನಂದಿ ವೈದ್ಯಕೀಯ ವಿಜ್ಞಾನಗಳ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಮುಖ್ಯಸ್ಥ ಡಾ.ಮಂಜುನಾಥ್, ಜಿಲ್ಲಾ ಶಸ್ತ್ರಚಿಕಿತ್ಸಕಿ ಡಾ.ಮಂಜುಳಾ ಹಾಗೂ ಜಿಲ್ಲಾಸ್ಪತ್ರೆ ವೈದ್ಯರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಭಾಗವಹಿಸಿದ್ದರು. ನಂತರ ಮಾತನಾಡಿದ ನಂದಿ ವೈದ್ಯಕೀಯ ಕಾಲೇಜಿನ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಸುನಿಲ್ ಸುಭಾಷ್ ಜೋಷಿ, ದೇಶದಲ್ಲಿ ಬೇಡಿಕೆಗೆ ಅನುಗುಣವಾಗಿ ರಕ್ತ ಲಭ್ಯವಾಗುತ್ತಿಲ್ಲ. ೧೮ ವರ್ಷ ವಯಸ್ಸಿನ ನಂತರ ನಿಯಮಿತವಾಗಿ ರಕ್ತದಾನ ಮಾಡಬೇಕು ಎಂದು ತಿಳಿಸಿದರು.

**ಧ್ವನಿ: ಡಾ.ಸುನಿಲ್ ಸುಭಾಷ್ ಜೋಷಿ ( ೨೦ ಸೆಕೆಂಡ್ಸ್)**

**<><*<><>*><>**

ರೈತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ಜಾರಿಗೊಳಿಸಿರುವ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಕೋಲಾರ ಜಿಲ್ಲೆಯಲ್ಲಿ ಯಶಸ್ವಿಯಾಗಿದ್ದು, ರೈತರಿಂದ ಉತ್ತಮ ಸ್ಪಂದನೆ ದೊರೆತಿದೆ ಎಂದು ಕೋಲಾರ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಶಿವಾನಂದ ಹೊನಗಲ್ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕೋಲಾರ ಜಿಲ್ಲೆಯಲ್ಲಿ ಕಳೆದ ೧೫ ದಿನಗಳಿಂದ ನಡೆದ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ' ತೋಟಗಾರಿಕೆ, ಕೃಷಿ, ಮೀನುಗಾರಿಕೆ, ರೇಷ್ಮೆ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿಜ್ಞಾನಿಗಳ ತಂಡ ರೈತರೊಂದಿಗೆ ಸಂವಾದ ನಡೆಸಿದೆ ಎಂದು ಹೇಳಿದರು.

**ಧ್ವನಿ: ಡಾ.ಶಿವಾನಂದ ಹೊನಗಲ್, ವಿಜ್ಞಾನ ಕೇಂದ್ರದ ಮುಖ್ಯಸ್ಥ**

**( ೩೦ ಸೆಕೆಂಡ್ಸ್)**

**<><*<><>*><>**

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಗದಗ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಇದೇ ೨೧ ರಂದು ಬೆಳಿಗ್ಗೆ ಆಚರಿಸಲಾಗುತ್ತಿದ್ದು, ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅಧಿಕಾರಿಗಳಿಗೆ  ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿವಿಧ ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುವ ಮೂಲಕ ಯೋಗ ದಿನಾಚರಣೆ ಯಶಸ್ವಿಯಾಗುವಂತೆ ನೋಡಿಕೊಳ್ಳುವಂತೆ ಎಂದು ನಿರ್ದೇಶನ ನೀಡಿದರು.

**<><*<><>*><>**

ರೈತ ಸುರಕ್ಷಾ 'ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ' ಯಡಿ ಬೆಳೆ ವಿಮೆ ಬಗ್ಗೆ ರೈತರಿಗೆ ಮಾಹಿತಿ ಒದಗಿಸಲು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದ್ದ ಪ್ರಚಾರ ವಾಹನಕ್ಕೆ ಹಾಸನ ಜಿಲ್ಲಾಧಿಕಾರಿ ಸಿ.ಸತ್ಯಭಾಮ ಇಂದು ಚಾಲನೆ ನೀಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**